ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಕನ್ನಡ ಶಾಸ್ತ್ರೀಯ ಭಾಷೆ ಅಧ್ಯಯನ ಕೇಂದ್ರದ ಅನುದಾನ

ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

399 (362) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮೈಸೂರು ಮಾನಸ ಗಂಗೋತ್ರಿಯಲ್ಲಿ ಸ್ಥಾಪಿತವಾಗಿರುವ ಕನ್ನಡ ಶಾಸ್ತ್ರೀಯ ಭಾಷೆ ಉನ್ನತ ಅಧ್ಯಯನ ಕೇಂದ್ರಕ್ಕೆ ಅಗತ್ಯವಾಗಿರುವ ಪೂರ್ಣ ಪ್ರಮಾಣ ಸಿಬ್ಬಂದಿಯನ್ನು ಒದಗಿಸುವ ಮೂಲಕ ಕೇಂದ್ರವು ತ್ವರಿತವಾಗಿ ಕಾರ್ಯ ಪ್ರವೃತ್ತರಾಗಲು ಕ್ರಮ ಜರುಗಿಸಲಾಗುವುದೇ; ಈ ಕೇಂದ್ರದ ಮೂಲಕ ಶಾಸ್ತ್ರೀಯ ಭಾಷೆ ಅಧ್ಯಯನದ ನಿಟ್ಟಿನಲ್ಲಿ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ; ಈ ಯೋಜನೆಗಳನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಿ ಸೂಕ್ತ ಅನುದಾನ ಪಡೆಯಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ;

(ಆ) ಕನ್ನಡ ಶಾಸ್ತ್ರೀಯ ಭಾಷೆ ಎಂದು ಘೋಷಿತವಾದ ಮೇಲೆ, ಶಾಸ್ತ್ರೀಯ ಭಾಷೆಯ ಆಧ್ಯಯನಕ್ಕೆ ಇದುವರೆಗೆ ಕೇಂದ್ರದಿಂದ ದೊರೆತಿರುವ ಅನುದಾನ/ನೆರವು ಎಷ್ಟು;

(ಇ) ವಿಶ್ವವಿದ್ಯಾನಿಲಯಗಳ ಮೂಲಕ ಕನ್ನಡ ಶಾಸ್ತ್ರೀಯ ಭಾಷೆ ಅಧ್ಯಯನದ ನಿಟ್ಟಿನಲ್ಲಿ ಯಾವ ಯಾವ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಲಾಗಿದೆ? (ವಿವರ ಒದಗಿಸುವುದು)